97

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಇವರು ನಿಯಮ-72ರ ಮೇರೆಗೆ ನೀಡಿರುವ ಸೂಚನೆಗೆ ಮಾನ್ಯ ಕಂದಾಯ ಸಚಿವರ ಹೇಳಿಕೆ.**

**ವಿಷಯ:** ಕಂದಾಯ ಇಲಾಖೆಯಲ್ಲಿ ದ್ವಿತೀಯ ದರ್ಜೆ ಸಹಾಯಕರು ಮತ್ತು ಗ್ರಾಮ ಲೆಕ್ಕಾಧಿಕಾರಿಗಳ ನಡುವೆ ಪದೋನ್ನತಿ ವಿಚಾರವಾಗಿ ದಶಕಗಳಿಂದಲೂ ಜರುಗುತ್ತಿರುವ ಅನ್ಯಾಯ ಹಾಗೂ ತಾರತಮ್ಯಗಳ ವಿಚಾರವಾಗಿ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆದಿರುವ ಬಗ್ಗೆ.

---

**ಹೇಳಿಕೆ**

ಕಂದಾಯ ಇಲಾಖೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ The Karnataka Revenue Subordinate Branch Services (Recruitment) Rules 1977ರ ಅನುಸೂಚಿಗೆ ತಿದ್ದುಪಡಿ ತರುವ ಬಗ್ಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:21.01.2020ರಂದು ನಡೆದ ವೃಂದ ಮತ್ತು ನೇಮಕಾತಿ ನಿಯಮಗಳ ಪುನರ್ ಪರಿಶೀಲನಾ ಸಭೆಯಲ್ಲಿ ಗ್ರಾಮಲೆಕ್ಕಿಗರ ಹಾಗೂ ದ್ವಿತೀಯ ದರ್ಜೆ ಸಹಾಯಕರ ವೃಂದ ಬಲ ಹಾಗೂ ಸೇವಾ ಜೇಷ್ಠತೆಯನ್ನು ಪರಿಗಣಿಸಿ ಪ್ರಥಮ ದರ್ಜೆ ಸಹಾಯಕರ ವೃಂದಕ್ಕೆ ಈಗಿರುವ ಶೇಕಡವಾರು ಬಡ್ತಿ ಅವಕಾಶವನ್ನು ಮಾರ್ಪಡಿಸಿ 3:1ರ ಅನುಪಾತದಲ್ಲಿ(ಅಂದರೆ 4 ಹುದ್ದೆಗಳ ಸೈಕಲ್‌ನಲ್ಲಿ 3 ಹುದ್ದೆಗಳನ್ನು ಗ್ರಾಮಲೆಕ್ಕಿಗರಿಗೆ ಹಾಗೂ 1 ಹುದ್ದೆಯನ್ನು ದ್ವಿತೀಯ ದರ್ಜೆ ಸಹಾಯಕರಿಗೆ) ಬಡ್ತಿ ಅವಕಾಶವನ್ನು ಕಲ್ಪಿಸಿ, ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ತಿದ್ದುಪಡಿ ಮಾಡುವ ಬಗ್ಗೆ ಇಲಾಖೆಯು ಪರಿಶೀಲಿಸಿ ಕಂದಾಯ ಇಲಾಖೆಯ ಅಭಿಪ್ರಾಯದೊಂದಿಗೆ ಮಂಡಿಸುವಂತೆ ತೀರ್ಮಾನಿಸಲಾಗಿರುತ್ತದೆ.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸದರಿ ಸಭೆಯ ಸೂಚನೆಯಂತೆ ಪರಿಶೀಲನೆಗಾಗಿ ಕಂದಾಯ ಇಲಾಖೆಯ ಎಲ್ಲಾ ವಿಭಾಗದ ಪ್ರಾದೇಶಿಕ ಆಯುಕ್ತರ ಅಭಿಪ್ರಾಯ ಪಡೆಯಲಾಗಿ, 04 ವಿಭಾಗದ ಪ್ರಾದೇಶಿಕ ಆಯುಕ್ತರುಗಳಿಂದ ದ್ವಿತೀಯ ದರ್ಜೆ ಸಹಾಯಕರು ಮತ್ತು ಗ್ರಾಮಲೆಕ್ಕಿಗರು ಈ ಎರಡೂ ವೃಂದಗಳಿಂದ ಪ್ರಥಮ ದರ್ಜೆ ಸಹಾಯಕರು / ರಾಜಸ್ವ ನಿರೀಕ್ಷಕರ ವೃಂದಕ್ಕೆ ಮುಂಬಡ್ತಿ ನೀಡಬೇಕಾಗಿರುವುದರಿಂದ ಒಂದೇ ಜೇಷ್ಠತಾ ಪಟ್ಟಿಯನ್ನು (ಸಂಯುಕ್ತ ಜೇಷ್ಠತಾ ಪಟ್ಟಿ) ತಯಾರಿಸಿ ಸೇವಾ ಹಿರಿತನದ ಆಧಾರದ ಮೇಲೆ ಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಬಹುದಾಗಿದೆಯೆಂದು ಅಭಿಪ್ರಾಯ ಸ್ವೀಕೃತವಾಗಿರುತ್ತದೆ.

ಕಂದಾಯ ಇಲಾಖೆಯಲ್ಲಿ ಎಲ್ಲಾ ಜಿಲ್ಲಾ ಘಟಕಗಳನ್ನು ಒಳಗೊಂಡಂತೆ ಒಟ್ಟು 3059 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳು ಹಾಗೂ ಗ್ರಾಮಲೆಕ್ಕಿಗರ ವೃಂದದಲ್ಲಿ ಒಟ್ಟು 9843 ಹುದ್ದೆಗಳು ಮಂಜೂರಾಗಿರುತ್ತವೆ. ಗ್ರಾಮಲೆಕ್ಕಿಗರ ಹುದ್ದೆಗಳನ್ನು ಸಕ್ಷಮ ಪ್ರಾಧಿಕಾರವಾದ ಆಯಾಯ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಂದ ಖಾಲಿ ಹುದ್ದೆಗಳಿಗನುಸಾರವಾಗಿ ನಿಗಧಿತ ವಿದ್ಯಾರ್ಹತೆ ಹಾಗೂ ಗರಿಷ್ಠ ಅಂಕಗಳ ಅರ್ಹತೆಯ ಮೇಲೆ ನೇಮಕ ಮಾಡಲಾಗುತ್ತದೆ ಹಾಗೂ ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದಿಂದ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲಾಗುತ್ತದೆ.

ಗ್ರಾಮಲೆಕ್ಕಿಗರು ಮತ್ತು ದ್ವಿತೀಯ ದರ್ಜೆ ಸಹಾಯಕರಿಗೆ ಒಂದೇ ವೇತನ ಶ್ರೇಣಿಯನ್ನು ಮತ್ತು ನೇಮಕಾತಿಗೆ ಸಮಾನ ವಿದ್ಯಾರ್ಹತೆಯನ್ನು ನಿಗಧಿಪಡಿಸಿರುವುದರಿಂದ ಹಾಗೂ ಪ್ರಥಮ ದರ್ಜೆ

...2

ಸಹಾಯಕರ / ರಾಜಸ್ವ ನಿರೀಕ್ಷಕರ ವೃಂದಕ್ಕೆ ಈ ಎರಡೂ ವೃಂದಗಳು ಪೋಷಕ ವೃಂದವಾಗಿರುವುದರಿಂದ, ಹಾಗೂ ಪ್ರಸ್ತುತ ಜಾರಿಯಲ್ಲಿರುವ ಮುಂಬಡ್ತಿಯ ಕೋಟಾದಂತೆ ನೀಡಲಾಗುತ್ತಿರುವ ಮುಂಬಡ್ತಿಗಳಲ್ಲಿ ವಿವಿಧ ಜಿಲ್ಲೆಗಳಲ್ಲಿ ದ್ವಿತೀಯ ದರ್ಜೆ ಸಹಾಯಕರು ಮತ್ತು ಗ್ರಾಮಲೆಕ್ಕಿಗರು ಮುಂಬಡ್ತಿ ಪಡೆಯುತ್ತಿರುವ ಸೇವಾ ಅವಧಿಯಲ್ಲಿ ಸಾಕಷ್ಟು ಅಸಮಾನತೆ ಕಂಡುಬಂದಿರುತ್ತದೆ.

ಆದ್ದರಿಂದ, ಈ ಅಸಮಾನತೆಯನ್ನು ಸರಿದೂಗಿಸಲು ಉದ್ದೇಶಿಸಿ, ಗ್ರಾಮಲೆಕ್ಕಿಗರು ಹಾಗೂ ದ್ವಿತೀಯ ದರ್ಜೆ ಸಹಾಯಕರನ್ನು ಒಳಗೊಂಡ ಒಂದೇ ಜೇಷ್ಠತಾ ಪಟ್ಟಿಯನ್ನು (ಸಂಯುಕ್ತ ಜೇಷ್ಠತಾ ಪಟ್ಟಿ) ತಯಾರಿಸಲು ಹಾಗೂ ಸೇವಾ ಹಿರಿತನದ ಆಧಾರದ ಮೇಲೆ ಪದೋನ್ನತಿ ನೀಡುವ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಈ ಕುರಿತು ಎಲ್ಲಾ ಪ್ರಾದೇಶಿಕ ಆಯುಕ್ತರುಗಳು ಶಿಫಾರಸ್ಸು ಮಾಡಿರುವುದರಿಂದ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾ ನಿಯಮಗಳು) ಶಾಖೆಯು ನೀಡಿರುವ ಅಭಿಪ್ರಾಯದಂತೆ ಕಂದಾಯ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ದಿನಾಂಕ:15.03.2021ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯ ವೃಂದ ಪರಿಶೀಲನಾ ಸಮಿತಿಯ ಮುಂದೆ ಮಂಡಿಸಲಾಗಿರುತ್ತದೆ.

ದಿನಾಂಕ:15.03.2021ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ವೃಂದ ಪರಿಶೀಲನಾ ಸಮಿತಿಯ ಸಭೆಯಲ್ಲಿ ಗ್ರಾಮಲೆಕ್ಕಿಗರು ಹಾಗೂ ದ್ವಿತೀಯ ದರ್ಜೆ ಸಹಾಯಕರ ಸಾಮಾನ್ಯ ಜೇಷ್ಠತಾ ಪಟ್ಟಿಯನ್ನು ತಯಾರಿಸಿದಲ್ಲಿ, ತತ್ಪರಿಣಾಮವಾಗಿ ಏನಾದರೂ ಗಂಭೀರ ಸಮಸ್ಯೆ ಎದುರಾಗುವ ಬಗ್ಗೆ ಗ್ರಾಮಲೆಕ್ಕಿಗರ ಸಂಘ ಹಾಗೂ ಲಿಪಿಕ (ದ್ವಿತೀಯ ದರ್ಜೆ ಸಹಾಯಕರ) ನೌಕರರ ಸಂಘಗಳು ನೀಡಿರುವ ಮನವಿಗಳು ಮತ್ತು ಆಕ್ಷೇಪಣೆಗಳ ಕುರಿತು ಸುದೀರ್ಘವಾಗಿ ಚರ್ಚಿಸಲಾಯಿತು ಹಾಗೂ ಅಂತಿಮವಾಗಿ, ಕಂದಾಯ ಇಲಾಖೆಯ ದ್ವಿತೀಯ ದರ್ಜೆ ಸಹಾಯಕರು ಮತ್ತು ಗ್ರಾಮಲೆಕ್ಕಿಗರು ಈ ಎರಡೂ ವೃಂದ ಒಂದೇ ಜೇಷ್ಠತಾ ಪಟ್ಟಿಯನ್ನು (ಸಂಯುಕ್ತ ಜೇಷ್ಠತಾ ಪಟ್ಟಿ) ತಯಾರಿಸಿ ಸೇವಾ ಹಿರಿತನದ ಆಧಾರದ ಮೇಲೆ ಬಡ್ತಿ ನೀಡಲು ಸದರಿ ಸಭೆಯಲ್ಲಿ ಹಾಜರಿದ್ದ ಆರ್ಥಿಕ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಕಾನೂನು ಇಲಾಖೆ ಹಾಗೂ ಸಂಸದೀಯ ವ್ಯವಹಾರಗಳ ಇಲಾಖೆಯ ಪ್ರತಿನಿಧಿಗಳೊಂದಿಗೆ ಚರ್ಚಿಸಿ, ತೀರ್ಮಾನ ಕೈಗೊಳ್ಳಲಾಗಿರುತ್ತದೆ.

ಅದರಂತೆ, ಗ್ರಾಮಲೆಕ್ಕಿಗರ ಹಾಗೂ ದ್ವಿತೀಯ ದರ್ಜೆ ಸಹಾಯಕರು ವೃಂದದ ನೌಕರರ ಸಂಯುಕ್ತ ಜೇಷ್ಠತಾ ಪಟ್ಟಿಯನ್ನು ತಯಾರಿಸಿ ಮುಂಬಡ್ತಿಗೆ ಪರಿಗಣಿಸಲು ಮಾನ್ಯ ಸಚಿವ ಸಂಪುಟದ ಅನುಮೋದನೆಯೊಂದಿಗೆ, The Karnataka Revenue Subordinate Branch Services (Recruitment) (Amendment) Rules 2021ನ್ನು ದಿನಾಂಕ:29.07.2021ರಂದು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ. ಕರಡು ತಿದ್ದುಪಡಿಗೆ ಸ್ವೀಕೃತಗೊಂಡಿರುವ ಆಕ್ಷೇಪಣೆ / ಸಲಹೆ ಸೂಚನೆಗಳು ಸರ್ಕಾರದ ಪರಿಶೀಲನೆಯಲ್ಲಿದ್ದು, ಯಾವುದೇ ವೃಂದದ ನೌಕರರಿಗೆ ಅನ್ಯಾಯ / ಅಸಮಾನತೆ ಉಂಟಾಗದಂತೆ ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

**(ಕಂಇ 170 ಬಿಎಸ್‌ಐ 2021)**

**(ಆರ್.ಅಶೋಕ)**
ಕಂದಾಯ ಸಚಿವರು